# ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ

ಕಬ್ಬನ್ ಉದ್ಯಾನವನ, ಬೆಂಗಳೂರು – 560 001.

ನಂ. ಜಿಇಎ/271/2023 ದಿನಾಂಕ: 10-05-2023

## ಸಂಘದ ಪ್ರಕಟಣೆ

ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ

**ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ-2023**

***

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಪ್ರತಿಭಾನ್ವಿತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ **'ಪ್ರತಿಭಾ ಪುರಸ್ಕಾರ'** ವನ್ನು ನೀಡಿ ಗೌರವಿಸಲಾಗುತ್ತಿದೆ.

ಆದರಂತೆ 2023ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳಲ್ಲಿ ಶೇ.90% ಕ್ಕಿಂತ ಹೆಚ್ಚು ಅಂಕಗಳಿಸಿರುವ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರವನ್ನು ನೀಡಲು ನಮ್ಮ ಸಂಘದಿಂದ **Online** ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

## ನಿಬಂಧನೆಗಳು

1. ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ತಂದೆ-ತಾಯಿ ರಾಜ್ಯ ಸರ್ಕಾರಿ ನೌಕರರಾಗಿರಬೇಕು ಹಾಗೂ ಸರ್ಕಾರಿ ನೌಕರರ ಸಂಘದ ಸದಸ್ಯರಾಗಿರಬೇಕು.
2. ಸಂಘದಿಂದ ನಿಗಧಿಪಡಿಸಿರುವ ನಮೂನೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ/ತಾಲ್ಲೂಕು/ಯೋಜನಾ ಶಾಖೆ ಅಧ್ಯಕ್ಷರು ಮತ್ತು ಬೆಂಗಳೂರು ನಗರ ರಾಜ್ಯ ಪರಿಷತ್ ಸದಸ್ಯರಿಂದ ದೃಢೀಕರಿಸಿ ಸಲ್ಲಿಸುವುದು.
3. ನಿಗಮ, ಮಂಡಳಿ, ಪಾಧ್ರಿಕಾರ, ವಿಶ್ವವಿದ್ಯಾಲಯ, ಖಾಸಗಿ ಹಾಗೂ ಅನುದಾನಿತ ವಿದ್ಯಾಸಂಸ್ಥೆಯ ನೌಕರರಾಗಿದ್ದಲ್ಲಿ ಅರ್ಜಿ ಸಲ್ಲಿಸುವಂತಿಲ್ಲ.
4. ನಮೂನೆ ಹಾಗೂ ಅಗತ್ಯ ದಾಖಲೆಗಳಿಲ್ಲದಿದ್ದಲ್ಲಿ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
5. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31-05-2023

**Online link :- https://bit.ly/ksgeapp2023**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-22354783/84, 9902135813 ಸಂಪರ್ಕಿಸುವುದು.

ಮೇಲ್ಕಂಡ ಮಾಹಿತಿಯನ್ನು ತಮ್ಮ ನೌಕರರಿಗೆ ತಿಳಿಸುವಂತೆ ಹಾಗೂ ತಮ್ಮ ಜಿಲ್ಲಾ/ತಾಲ್ಲೂಕು ವ್ಯಾಪ್ತಿಯ ಪತ್ರಿಕೆಗಳಲ್ಲಿ ಪ್ರಚುರಪಡಿಸುವುದು.

(ಸಿ.ಎಸ್.ಷಡಾಕ್ಷರಿ)
ರಾಜ್ಯಾಧ್ಯಕ್ಷರು

ಗೆ:

1. ಜಿಲ್ಲಾಧ್ಯಕ್ಷರು/ಜಿಲ್ಲಾ ಕಾರ್ಯದರ್ಶಿಗಳು, ಹಾಗೂ ತಾಲ್ಲೂಕು ಅಧ್ಯಕ್ಷರು/ಕಾರ್ಯದರ್ಶಿಗಳು, ಕ.ರಾ.ಸ.ನೌ.ಸಂಘ
2. ರಾಜ್ಯದ ಎಲ್ಲಾ ಸರ್ಕಾರಿ ನೌಕರರ ಗಮನಕ್ಕೆ.